# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 208 (309) |
| ಸದಸ್ಯರ ಹೆಸರು | : | ಶ್ರೀ ಪ್ರದೀಪ್ ಶೆಟ್ಟರ್ |
| ಉತ್ತರಿಸಬೇಕಾದ ದಿನಾಂಕ | : | 04.03.2020 |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಜನಾಂಗದವರಿಗೆ ನೀಡಲಾಗುತ್ತಿರುವ ಸವಲತ್ತುಗಳಾವುವು; | ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಜನಾಂಗದವರಿಗೆ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳ ವಿವರ ಈ ಕೆಳಕಂಡಂತಿದೆ.<br>1. ಉದ್ಯಮಶೀಲತಾ ಯೋಜನೆ<br>2. ಭೂ ಒಡೆತನ ಯೋಜನೆ<br>3. ಮೈಕ್ರೊ ಕ್ರೆಡಿಟ್ (ಪ್ರೇರಣಾ) ಯೋಜನೆ<br>4. ಗಂಗಾ ಕಲ್ಯಾಣ ಯೋಜನೆ<br>5. ಸಮೃದ್ಧಿ ಯೋಜನೆ<br>6. ಐರಾವತ ಯೋಜನೆ |
| ಆ) | ನಿಗಮದ ಎಲ್ಲಾ ಯೋಜನೆಗಳ ಮಾಹಿತಿ ನೀಡುವುದು; | ಯೋಜನೆಗಳ ಮಾಹಿತಿಯ ವಿವರಗಳನ್ನು ಅನುಬಂಧ-1 ರಲ್ಲಿ ನೀಡಿದೆ. |
| ಇ) | ಹುಬ್ಬಳ್ಳಿ-ಧಾರವಾಡ, ಗದಗ, ಹಾವೇರಿ ಜಿಲ್ಲೆಯಲ್ಲಿ ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸವಲತ್ತುಗಳನ್ನು ಪಡೆದಂತಹ ಫಲಾನುಭವಿಗಳ ಸಂಖ್ಯೆ ಎಷ್ಟು; | ವಿವಿಧ ಯೋಜನೆಗಳಡಿ ಪ್ರಸಕ್ತ ಸಾಲಿನಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ ಕೆಳಕಂಡಂತಿದೆ.<br><table><tr><th>ಕ್ರ.ಸಂ.</th><th>ಜಿಲ್ಲೆ</th><th>ಫಲಾನುಭವಿಗಳ ಸಂಖ್ಯೆ</th></tr><tr><td>1</td><td>ಧಾರವಾಡ</td><td>358</td></tr><tr><td>2</td><td>ಗದಗ</td><td>281</td></tr><tr><td>3</td><td>ಹಾವೇರಿ</td><td>213</td></tr></table> |
| ಈ) | 2018-19ನೇ ಸಾಲಿನಲ್ಲಿ ಸದರಿ ನಿಗಮದಿಂದ ಸವಲತ್ತುಗಳನ್ನು ಪಡೆದಂತಹ ಫಲಾನುಭವಿಗಳ ಸಂಖ್ಯೆಯ ವಿವರವನ್ನು ಜಿಲ್ಲಾವಾರು ನೀಡುವುದು? | ಜಿಲ್ಲಾವಾರು ವಿವರಗಳನ್ನು ಅನುಬಂಧ-2 ರಲ್ಲಿ ನೀಡಿದೆ. |

ಸಂಖ್ಯೆ: ಸಕಇ 107 ಎಸ್‌ಡಿಸಿ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು

## <u>ಅನುಬಂಧ-1</u>

## ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು

ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ಇವರು ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ:208 (309)ಕ್ಕೆಉತ್ತರ

ಡಾ:ಬಿ.ಆರ್.ಅಂಬೇಡ್ಕರ್ಅಭಿವೃದ್ಧಿ ನಿಗಮದಿಂದ ಈ ಕೆಳಕಂಡ ಯೋಜನೆಗಳ ಸವಲತ್ತುಗಳನ್ನು ಪರಿಶಿಷ್ಟ ಜಾತಿಯ ಜನಾಂಗಕ್ಕೆ ಒದಗಿಸಲಾಗಿದೆ.

**1. ಉದ್ಯಮಶೀಲತಾ ಅಭಿವೃದ್ಧಿ ಯೋಜನೆ:**

ನಿರುದ್ಯೋಗಿ ಯುವಕ/ಯುವತಿಯರು ಸಣ್ಣ ಕೈಗಾರಿಕೆ, ಸೇವಾ ಕ್ಷೇತ್ರ ಮತ್ತು ವ್ಯಾಪಾರಿ ಕ್ಷೇತ್ರಗಳಲ್ಲಿ ಸ್ವಯಂ ಉದ್ಯೋಗ ಘಟಕಗಳನ್ನು ಆರಂಭಿಸಲು ನಿಗಮದ ಸಹಾಯಧನ ಮತ್ತು ಬ್ಯಾಂಕಿನ ಸಾಲ ವ್ಯವಸ್ಥೆಯೊಂದಿಗೆ ಯೋಜನೆಯನ್ನು ಅನುಷ್ಠಾನ ಮಾಡಲಾಗುವುದು. ಈ ಯೋಜನೆಯಡಿ ಮೂರು ಹಂತದ ಘಟಕ ವೆಚ್ಚವನ್ನು ಆಧರಿಸಿ ಸಹಾಯಧನವನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ.

1. ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಡಿ 1. ಘಟಕ ವೆಚ್ಚ 5.00ಲಕ್ಷಗಳವರೆಗೆ ಶೇ.70% ಅಥವಾ ಗರಿಷ್ಠ ರೂ.3.50ಲಕ್ಷ ಸಹಾಯಧನ
2. ಘಟಕ ವೆಚ್ಚ ರೂ.5.00 ದಿಂದ 10.00ಲಕ್ಷಗಳವರೆಗೆ ಶೇ.60% ಅಥವಾ ಗರಿಷ್ಠ ರೂ.5.00ಲಕ್ಷ ಸಹಾಯಧನ
3. ಘಟಕ ವೆಚ್ಚ ರೂ.10.00 ದಿಂದ 20.00ಲಕ್ಷಗಳವರೆಗೆ ಶೇ.50% ಅಥವಾ ಗರಿಷ್ಠ ರೂ.5.00ಲಕ್ಷ ಸಹಾಯಧನ ಒದಗಿಸಲಾಗುವುದು.

**2. ಮೈಕ್ರೊಕ್ರೆಡಿಟ್ (ಪ್ರೇರಣಾ) ಯೋಜನೆ:**

ಕನಿಷ್ಟ 10 ಮಹಿಳೆಯರ ಸ್ವಸಹಾಯ ಗುಂಪನ್ನು ರಚಿಸುವುದು/ಹಾಲಿ ಅಸ್ತಿತ್ವದಲ್ಲಿರುವ ಮಹಿಳಾ ಸ್ವಸಹಾಯ ಗುಂಪಿಗೆ ಆರ್ಥಿಕ ಬೆಂಬಲವನ್ನು ನೀಡಲಾಗುವುದು. ಸೇವಾಘಟಕ ಆರಂಭಿಸಲು ರೂ.2.50ಲಕ್ಷ ಸಾಲ ಸಹಾಯಧನವನ್ನು ಮಂಜೂರು ಮಾಡಲಾಗುವುದು. ಪ್ರತಿ ಸದಸ್ಯರಿಗೆ ರೂ.25,000/-ದಂತೆ ಹಣವನ್ನು ನಿಗಮ ಭರಿಸಿ (ರೂ.15,000/- ಸಹಾಯಧನ ಮತ್ತು ರೂ.10,000/- ಬೀಜಧನ ಸಾಲ) ಯೋಜನೆಯನ್ನು ಅನುಷ್ಟಾನ ಮಾಡಲಾಗುವುದು.

**3. ಐರಾವತ ಯೋಜನೆ :**

ಪ್ರವಾಸಿ ಟ್ಯಾಕ್ಸಿಗಳ ಮಾಲೀಕರನ್ನಾಗಿ ಮಾಡಿ "ಓಲಾ"/"ಉಬರ್/ಮೇರು" ಸಂಸ್ಥೆಗಳ ಸಹಯೋಗದಲ್ಲಿ ಅತಿ ಹೆಚ್ಚು ಆದಾಯ ಪಡೆಯುವ "ಐರಾವತ ಯೋಜನೆ" ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ಈ ಯೋಜನೆಗೆ ಗರಿಷ್ಟ ರೂ.5.00ಲಕ್ಷಗಳವರೆಗೆ ನಿಗಮದಿಂದ ಸಹಾಯಧನ ಒದಗಿಸಲಾಗುವುದು. ಉಳಿದ ಭಾಗ ಬ್ಯಾಂಕ್/ಹಣಕಾಸು ಸಂಸ್ಥೆ/ಫಲಾನುಭವಿಯ ವಂತಿಕೆಯಿಂದ ಭರಿಸಿ ಯೋಜನೆಯನ್ನು ಅನುಷ್ಟಾನ ಮಾಡಲಾಗುವುದು.

**4. ಸಮೃದ್ಧಿ ಯೋಜನೆ:**

ಉದ್ಯಮಶೀಲತಾ ತರಬೇತಿ/ವೃತ್ತಿ ಕೌಶಲ್ಯ ತರಬೇತಿಯನ್ನು ನೀಡಿ ಮಾರುಕಟ್ಟೆ ವ್ಯವಸ್ಥೆಯೊಂದಿಗೆ ಘಟಕಗಳನ್ನು ಸೃಷ್ಟಿಸಲು ವ್ಯವಸ್ಥೆ ಮಾಡಲಾಗುವುದು. ಉತ್ತಮ ಮಾರುಕಟ್ಟೆ ಹೊಂದಿರುವ ಸರ್ಕಾರಿ ಮತ್ತು ಖಾಸಗಿ ಬ್ರಾಂಡೆಡ್ ಸಂಸ್ಥೆಗಳ ಸಹಯೋಗದಲ್ಲಿ ಫ್ರಾಂಚೈಸಿ/ಡೀಲರ್‌ಶಿಪ್ ವ್ಯವಸ್ಥೆಯೊಂದಿಗೆ ರಿಟೈಲ್ ವ್ಯಾಪಾರಿ ಮಳಿಗೆಗಳನ್ನು ಆರಂಭಿಸಲು ಅಗತ್ಯವಾದ ತಾಂತ್ರಿಕ ಬೆಂಬಲ ಹಾಗೂ ಆರ್ಥಿಕ ಬೆಂಬಲ ನೀಡಿ ಯಶಸ್ವಿ ಉದ್ದಿಮೆದಾರರನ್ನಾಗಿ

ಮಾಡುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಆಯ್ಕೆಯಾದ ಪ್ರತೀ ಫಲಾನುಭವಿಗೆ ಗರಿಷ್ಟ ರೂ.10.00ಲಕ್ಷಗಳವರೆಗೆ ಆರ್ಥಿಕ ಬೆಂಬಲ ಒದಗಿಸಲಾಗುತ್ತದೆ.

**4. ಉನ್ನತಿ ಯೋಜನೆ:**

ಈ ಯೋಜನೆಯನ್ನು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಪ್ರತಿಭಾವಂತ ಯುವಕ/ಯುವತಿಯರು ಸ್ಟಾರ್ಟ್‌ಅಪ್ ಉದ್ದಿಮೆಗಳನ್ನು ಆರಂಭಿಸಿದ್ದಲ್ಲಿ ಪ್ರಾರಂಭಿಕ ಆರ್ಥಿಕ ಸಮಸ್ಯೆಗಳಿಗೆ ಬೆಂಬಲವಾಗಿ ಆಯ್ಕೆಯಾಗುವ ಪ್ರತಿ ಅರ್ಹ ಉದ್ಯಮಿಗೆ ರೂ.50.00ಲಕ್ಷಗಳವರೆಗೆ ಆರ್ಥಿಕ ಸಹಾಯ ಮಾಡುವುದು ಯೋಜನೆಯ ಉದ್ದೇಶವಾಗಿರುತ್ತದೆ. ಕರ್ನಾಟಕ ಸರ್ಕಾರದ ಐಟಿಬಿಟಿ ಇಲಾಖೆಯಲ್ಲಿ ಈಗಾಗಲೇ ಈ ಯೋಜನೆಯು ಅಸ್ತಿತ್ವದಲ್ಲಿದ್ದು, ಅದೇ ಮಾದರಿಯಲ್ಲಿ ಪರಿಶಿಷ್ಟ ಜಾತಿಯ ಪ್ರತಿಭಾವಂತ ಉದ್ಯಮಿಗಳಿಗೆ ಈ ಯೋಜನೆಯನ್ನು ವಿಸ್ತರಿಸುವ ಮೂಲಕ ಅನುಷ್ಟಾನಗೊಳಿಸಲಾಗಿದೆ.

**5. ಗಂಗಾ ಕಲ್ಯಾಣ ಯೋಜನೆ**

ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆಬಾವಿ ಯೋಜನೆಯಡಿ 1½ ಎಕರೆಯಿಂದ 5.00 ಎಕರೆ ಒಣ ಜಮೀನು ಹೊಂದಿರುವ ಪರಿಶಿಷ್ಟ ಜಾತಿಯ ಸಣ್ಣ ಮತ್ತು ಅತೀ ಸಣ್ಣ ರೈತರ ಜಮೀನಿನಲ್ಲಿ ಕೊಳವೆಬಾವಿ ಕೊರೆಸಿ, ಪಂಪ್‌ಸೆಟ್ ಅಳವಡಿಸಿ ವಿದ್ಯುದ್ಧೀಕರಣಗೊಳಿಸಿ ನೀರಾವರಿ ಸೌಲಭ್ಯ ಕಲ್ಪಿಸಲಾಗುತ್ತಿದೆ. ಮಲೆನಾಡು ಪ್ರದೇಶಗಳಾದ ಕೊಡಗು, ದಕ್ಷಿಣ ಕನ್ನಡ, ಉಡುಪಿ, ಕಾರವಾರ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ 1.00 ಎಕರೆ ಜಮೀನು ಹೊಂದಿರುವವರಿಗೂ ಸಹ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ. ಈ ಯೋಜನೆಯಡಿ ಘಟಕ ವೆಚ್ಚವನ್ನು ಪರಿಷ್ಕರಿಸಿದ್ದು, ಬೆಂಗಳೂರು(ನ), ಬೆಂಗಳೂರು(ಗ್ರಾ), ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಮತ್ತು ರಾಮನಗರ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಕೆಳಗೆ ಕುಸಿದಿರುವುದರಿಂದ ಈ ಜಿಲ್ಲೆಗಳಲ್ಲಿ ಯೋಜನೆಯ ಘಟಕ ವೆಚ್ಚ ರೂ 4.50 ಲಕ್ಷಗಳಿಗೆ ನಿಗದಿಪಡಿಸಲಾಗಿದ್ದು, ಇದರಲ್ಲಿ ರೂ. 3.50 ಲಕ್ಷ ಸಹಾಯಧನವಿದ್ದು, ರೂ. 50,000/-ಗಳು ವಿದ್ಯುದ್ದೀಕರಣ ವೆಚ್ಚ ಮತ್ತು ಉಳಿದ ರೂ. 50,000/- ಅವಧಿ ಸಾಲವಾಗಿರುತ್ತದೆ. ಉಳಿದ 26 ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ. 3.50 ಲಕ್ಷ ನಿಗದಿಪಡಿಸಿದ್ದು, ಇದರಲ್ಲಿ ರೂ. 2.50 ಲಕ್ಷ ಸಹಾಯಧನವಿದ್ದು, ರೂ. 50,000/-ಗಳು ವಿದ್ಯುದ್ದೀಕರಣ ವೆಚ್ಚ ಮತ್ತು ಉಳಿದ ರೂ. 50,000/-ಗಳು ಅವಧಿಸಾಲವಾಗಿರುತ್ತದೆ.

**6. ಭೂ ಒಡೆತನ ಯೋಜನೆ**

ರಾಜ್ಯದಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಭೂರಹಿತ ಕೃಷಿ ಕಾರ್ಮಿಕರ ಕುಟುಂಬದ ಮಹಿಳೆಯರಿಗೆ ಮಾತ್ರ ಈ ಯೋಜನೆಯಡಿ ಸೌಲಭ್ಯವನ್ನು ನೀಡಲಾಗುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಸಕಇ 148ಎಸ್‌ಡಿಸಿ2017, ಬೆಂಗಳೂರು, ದಿನಾಂಕ:20.04.2017 ರಂತೆ ಘಟಕ ವೆಚ್ಚ ಗರಿಷ್ಠ ರೂ.15.00ಲಕ್ಷ ಇದ್ದು, ಇದರಲ್ಲಿ ಶೇ.50 ಭಾಗ ಸಹಾಯಧನ ಹಾಗೂ ಶೇ.50 ಭಾಗ ಸಾಲದ ರೂಪದಲ್ಲಿ ಆರ್ಥಿಕ ನೆರವನ್ನು ನೀಡಲಾಗುವುದು. ರೂ.15.00ಲಕ್ಷ ಘಟಕ ವೆಚ್ಚದ ಮಿತಿಯಲ್ಲಿ ಕನಿಷ್ಠ 2 ಎಕರೆ ಖುಷ್ಕಿ ಅಥವಾ ಕನಿಷ್ಠ 1 ಎಕರೆ ತರಿ/ಭಾಗಾಯ್ತು ಜಮೀನುಗಳನ್ನು ಅಥವಾ ಬಾಗಾಯ್ತು ಅರ್ಧ ಎಕರೆಗೆ(20 ಗುಂಟೆ) ಕಡಿಮೆಯಲ್ಲದಂತೆ ಒದಗಿಸಲಾಗುವುದು. ಫಲಾನುಭವಿಯು ಸಾಲದ ಹಣವನ್ನು 10 ವಾರ್ಷಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕು. ಇದಕ್ಕೆ ಬಡ್ಡಿದರ ಶೇ.6 ವಿಧಿಸಲಾಗುತ್ತದೆ. ಜಮೀನನ್ನು ಮಾರಾಟ ಮಾಡುವವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜನಾಂಗಕ್ಕೆ ಸೇರಿದವರಾಗಿರಬಾರದು. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಸಮಿತಿಯು ದರ ನಿಗದಿಪಡಿಸುತ್ತದೆ.

## ಅನುಬಂಧ-2

**ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು**

**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ. ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳಿಂದ**

| ಕ್ರ ಸಂ. | ಜಿಲ್ಲೆಯ ಹೆಸರು | ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ |
|---|---|---|
| | | 2018-19 |
| 1 | ಬೆಂಗಳೂರು (ಗ್ರಾ) | 601 |
| 2 | ರಾಮನಗರ | 260 |
| 3 | ಬೆಂಗಳೂರು (ನ) | 875 |
| 4 | ದಾವಣಗೆರೆ | 654 |
| 5 | ಕೋಲಾರ | 260 |
| 6 | ಚಿಕ್ಕಬಳ್ಳಾಪುರ | 165 |
| 7 | ಚಿತ್ರದುರ್ಗ | 1016 |
| 8 | ತುಮಕೂರು | 940 |
| 9 | ಶಿವಮೊಗ್ಗ | 335 |
| 10 | ಮೈಸೂರು | 727 |
| 11 | ಮಂಡ್ಯ | 260 |
| 12 | ಹಾಸನ | 701 |
| 13 | ಚಾಮರಾಜನಗರ | 571 |
| 14 | ಕೊಡಗು | 49 |
| 15 | ಚಿಕ್ಕಮಗಳೂರು | 425 |
| 16 | ದಕ್ಷಿಣ ಕನ್ನಡ | 298 |
| 17 | ಉಡುಪಿ | 107 |
| 18 | ಬಾಗಲಕೋಟೆ | 558 |
| 19 | ಬೆಳಗಾವಿ | 1096 |
| 20 | ಬಿಜಾಪುರ | 1095 |
| 21 | ಧಾರವಾಡ | 340 |
| 22 | ಗದಗ | 419 |
| 23 | ಹಾವೇರಿ | 342 |
| 24 | ಉತ್ತರ ಕನ್ನಡ | 188 |
| 25 | ಕೊಪ್ಪಳ | 537 |
| 26 | ರಾಯಚೂರು | 799 |

| | | |
|---|---|---|
| 27 | ಬಳ್ಳಾರಿ | 1038 |
| 28 | ಬೀದರ | 643 |
| 29 | ಗುಲ್ಬರ್ಗಾ | 1694 |
| 30 | ಯಾದಗಿರಿ | 896 |
| ಒಟ್ಟು | | **17889** |

ವ್ಯವಸ್ಥಾಪಕ ನಿರ್ದೇಶಕರು